ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015–16 ದಿನಾಂಕ: 23–11–2015

**<u>ಪತ್ರಿಕಾ ಪ್ರಕಟಣೆ</u>**

***<u>ವಿಧಾನ ಮಂಡಲದಲ್ಲಿ ಇಂದು:</u>***

# ಸಣ್ಣ ಪುಟ್ಟ ಆಣೆಕಟ್ಟುಗಳಿಗೆ ಯಥೇಚ್ಚವಾಗಿ ನೀರು ಬರುವ ಸುರಕ್ಷಿತ ವಾತಾವರಣ ಇಲ್ಲ

ಬೆಂಗಳೂರು, ನವೆಂಬರ್ 23 (ಕರ್ನಾಟಕ ವಾರ್ತೆ)

ತಿಪ್ಪಗೊಂಡನಹಳ್ಳಿ ಸೇರಿದಂತೆ ಇನ್ನಿತರ ಸಣ್ಣಪುಟ್ಟ ಆಣೆಕಟ್ಟುಗಳು ಭರ್ತಿಯಾಗಲು ಯಥೇಚ್ಚವಾಗಿ ನೀರು ಹರಿದು ಬರುವ ಅಚ್ಚುಕಟ್ಟು ಭಾಗದಲ್ಲಿ ಸುರಕ್ಷಿತ ವಾತಾವರಣ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆ ಎಂದು ಜಲ ಸಂಪನ್ಮೂಲ ಸಚಿವ ಎಂ.ಬಿ. ಪಾಟೀಲ್ ಅವರು ಇಂದು ವಿಧಾನಸಭೆಯಲ್ಲಿ ಶಾಸಕ ಅರವಿಂದ ಲಿಂಬಾವಳಿ ಅವರ ಪ್ರಶ್ನೆಗೆ ನೀಡಿದ ಲಿಖಿತ ಉತ್ತರದಲ್ಲಿ ತಿಳಿಸಿದ್ದಾರೆ.

ಜಲಾನಯನ ಪ್ರದೇಶದಲ್ಲಿರುವ ಹೆಸರುಘಟ್ಟ ಮತ್ತು ತಿಪ್ಪಗೊಂಡನಹಳ್ಳಿ ಜಲಾಶಯಗಳಿಗೆ ನೀರಿನ ಹರಿವಿನ ಪ್ರಮಾಣ ಇತ್ತೀಚಿನ ದಿನಗಳಲ್ಲಿ ಕಡಿಮೆಯಾಗಿದ್ದು ಇದಕ್ಕೆ ಕಾರಣಗಳನ್ನು ಪರಿಶೀಲಿಸಿ ಅಗತ್ಯ ಕಾಮಗಾರಿಗಳನ್ನು ಕೈಗೊಳ್ಳುವಂತೆ ಕಾವೇರಿ ನೀರಾವರಿ ನಿಗಮಕ್ಕೆ ಸೂಚಿಸಲಾಗಿದೆ. ಅದರನ್ವಯ, ಅರ್ಕಾವತಿ ಜಲಾನಯನ ಪ್ರದೇಶದಲ್ಲಿ ಬರುವ ಸಣ್ಣ ಪುಟ್ಟ ಹಳ್ಳಕೊಳ್ಳ ಮತ್ತು ತೊರೆಗಳಲ್ಲಿ ಶೇಖರಣೆಗೊಂಡಿದೆ. ಹೂಳು ಮತ್ತು ಗಿಡಗಂಟೆಳಿಂದಾಗಿ ನೀರಿನ ಹರಿಯುವಿಕೆಯಲ್ಲಿ ತೊಂದರೆಯಾಗಿರುವುದನ್ನು ಗಮನಿಸಿ, ಈ ಅಡೆತಡೆಗಳನ್ನು ತೆರವುಗೊಳಿಸಿ, ನೀರಿನ ಹರಿಯುವಿಕೆಯನ್ನು ಪುನರ್ ಸ್ಥಾಪಿಸಲು ಕ್ರಮ ವಹಿಸಲಾಗಿದೆ. ಈ ಹಿನ್ನೆಲೆಯಲ್ಲಿ ಹೆಸರುಘಟ್ಟ ಮತ್ತು ತಿಪ್ಪಗೊಂಡನಹಳ್ಳಿ ಜಲಾಶಯಗಳಿಗೆ ಕಳೆದ ಸಾಲುಗಳಲ್ಲಿ ಹೆಚ್ಚಿನ ನೀರು ಹರಿದು ಬಂದು ನೀರು ಸಂಗ್ರಹಣೆಯಾಗುತ್ತಿದೆ ಎಂದರು.

ಕಣ್ವಾ ನದಿಯು ಶಿಂಷಾ ನದಿಯ ಉಪ ನದಿಯಾಗಿದ್ದು, ಶಿಂಷಾ ನದಿ ಪುನಶ್ಚೇತನ ಕಾಮಗಾರಿ ಕೈಗೊಳ್ಳಲು ವಿವರವಾದ ಯೋಜನಾ ವರದಿಯನ್ನು ತಯಾರಿಸಲು ಸಲಹೆಗಾರರನ್ನು ನೇಮಿಸುವ ಪ್ರಕ್ರಿಯೆ ಪ್ರಗತಿಯಲ್ಲಿದೆ ಎಂದರು.

ಅರ್ಕಾವತಿ ಮತ್ತು ಕುಮುದ್ವತಿ ನದಿ ಪಾತ್ರಗಳ ಪುನಶ್ಚೇತನ ಕಾಮಗಾರಿಯನ್ನು ಒಟ್ಟು 3 ಹಂತಗಳಲ್ಲಿ ಕೈಗೊಂಡಿದ್ದು, ಬಹುತೇಕ ಪೂರ್ಣಗೊಂಡಿರುತ್ತದೆ ಎಂದು ಸಚಿವರು ಲಿಖಿತ ಉತ್ತರದಲ್ಲಿ ತಿಳಿಸಿದ್ದಾರೆ.

ಬಾಬು:ಜಿಪಿಆರ್.

## ಕೆ.ಆರ್.ಎಸ್. ಜಲಾಶಯದಲ್ಲಿ 3.318 ಟಿ.ಎಂ.ಸಿ. ಹೂಳು ಶೇಖರಣೆ

ಬೆಂಗಳೂರು, ನವೆಂಬರ್ 23 (ಕರ್ನಾಟಕ ವಾರ್ತೆ)

ಕೃಷ್ಣರಾಜಸಾಗರ ಜಲಾಶಯ ನಿರ್ಮಾಣವಾದಾಗಿನಿಂದ ಈವರೆಗೆ ಸುಮಾರು 3.318 ಟಿ.ಎಂ.ಸಿ. ಯಷ್ಟು ಪ್ರಮಾಣದ ಹೂಳು ಶೇಖರಣೆಯಾಗಿದ್ದು, ಈ ಪ್ರಮಾಣವು ಒಟ್ಟಾರೆ ಶೇಖರಣೆಯ ಶೇ 0.087 ರಷ್ಟು ಇರುತ್ತದೆ ಎಂದು ಜಲ ಸಂಪನ್ಮೂಲ ಸಚಿವ ಎಂ. ಬಿ. ಪಾಟೀಲ್ ಅವರು ಇಂದು ವಿಧಾನಸಭೆಯಲ್ಲಿ ಶಾಸಕ ಕೆ. ಗೋಪಾಲಯ್ಯ ಅವರ ಪ್ರಶ್ನೆಗೆ ನೀಡಿದ ಲಿಖಿತ ಉತ್ತರದಲ್ಲಿ ತಿಳಿಸಿದ್ದಾರೆ.

ಈ ಹೂಳಿನ ಪ್ರಮಾಣವು ಜಲಾಶಯದ ಒಟ್ಟಾರೆ ಶೇಖರಣೆಯ ಶೇ 0.087 ರಷ್ಟು ಮಾತ್ರ ಇರುವುದರಿಂದ, ಆಣೆಕಟ್ಟಿಗೆ ಯಾವುದೇ ರೀತಿಯ ಅಪಾಯವಿರುವುದಿಲ್ಲ ಎಂದರು.

ಹೂಳಿನ ಪ್ರಮಾಣವು ಸಿ.ಡಬ್ಲ್ಯೂ.ಸಿ. ತಿಳಿಸಿರುವ ಮಿತಿಗಿಂತ ಕಡಿಮೆ ಇರುತ್ತದೆ. ಆದ್ದರಿಂದ ಈ ಪ್ರಮಾಣದ ಹೂಳು ಶೇಖರಣೆಯಿಂದ ಯಾವುದೇ ಪ್ರತಿಕೂಲ ಪರಿಣಾಮ ಇಲ್ಲದಿರುವುದರಿಂದ, ಹೂಳನ್ನು ತೆಗೆಯಲು ಯಾವುದೇ ಕ್ರಮ ಕೈಗೊಂಡಿರುವುದಿಲ್ಲ ಎಂದು ಸಚಿವರು ಲಿಖಿತ ಉತ್ತರದಲ್ಲಿ ತಿಳಿಸಿದ್ದಾರೆ.

ಬಾಬು:ಜಿಪಿಆರ್.

## ಸಾಮಾಜಿಕ ಭದ್ರತಾ ಯೋಜನೆಯಡಿ ರಾಜ್ಯದಲ್ಲಿ 52.33 ಲಕ್ಷ ಫಲಾನುಭವಿಗಳಿಗೆ ಮಾಸಾಶನ ನೀಡಿಕೆ

ಬೆಂಗಳೂರು, ನವೆಂಬರ್ 23 (ಕರ್ನಾಟಕ ವಾರ್ತೆ)

ರಾಜ್ಯದಲ್ಲಿ ಸಾಮಾಜಿಕ ಭದ್ರತಾ ಯೋಜನೆಯಡಿ 52.33 ಲಕ್ಷ ಫಲಾನುಭವಿಗಳಿಗೆ ವಿವಿಧ ವರ್ಗಗಳ ಮಾಸಾಶನ ನೀಡಲಾಗುತ್ತಿದೆ ಎಂದು ಕಂದಾಯ ಸಚಿವ ವಿ. ಶ್ರೀನಿವಾಸಪ್ರಸಾದ್ ಅವರು ಇಂದು ವಿಧಾನಸಭೆಯಲ್ಲಿ ಶಾಂತಿನಗರ ಶಾಸಕ ಎನ್.ಎ. ಹ್ಯಾರಿಸ್ ಅವರ ಪ್ರಶ್ನೆಗೆ ನೀಡಿದ ಲಿಖಿತ ಉತ್ತರದಲ್ಲಿ ತಿಳಿಸಿದ್ದಾರೆ.

ಮನಸ್ವಿನಿ ಹಾಗೂ ವಿಧವಾ ವೇತನ ಯೋಜನೆಯಡಿ ಮಹಿಳೆಯರಿಗೆ ನೀಡಲಾಗುತ್ತಿರುವ ಮಾಸಾಶನಗಳಾಗಿವೆ. ಇಂದಿರಾ ಗಾಂಧಿ ರಾಷ್ಟ್ರೀಯ ವೃದ್ಧಾಪ್ಯ ವೇತನ ಯೋಜನೆ, ಅಂಗವಿಕಲ ವೇತನ ಯೋಜನೆ, ಸಂಧ್ಯಾ ಸುರಕ್ಷಾ ಯೋಜನೆ ಮತ್ತು ಮೈತ್ರಿ ಯೋಜನೆಗಳಡಿ ಪುರುಷ ಮತ್ತು ಮಹಿಳೆ ಇಬ್ಬರಿಗೂ ಮಾಸಾಶನ ನೀಡಲಾಗುತ್ತಿದೆ ಎಂದು ಸಚಿವರು ತಮ್ಮ ಲಿಖಿತ ಉತ್ತರದಲ್ಲಿ ತಿಳಿಸಿದರು.

ರಾಜ್ಯದಲ್ಲಿ ಸಾಮಾಜಿಕ ಭದ್ರತಾ ಯೋಜನೆಯಡಿ 2015 ರ ಅಕ್ಟೋಬರ್ ಅಂತ್ಯದವರೆಗೆ 7,18,735 ವೃದ್ಧಾಪ್ಯ ವೇತನ, 15,06,846 ವಿಧವಾ ವೇತನ, 8,11,462 ಅಂಗವಿಕಲ ವೇತನ, 21,29,754 ಸಂಧ್ಯಾ ಸುರಕ್ಷಾ ವೇತನ, 66,145 ಮನಸ್ವಿನಿ ಮಾಸಾಶನ ಹಾಗೂ 975 ಮೈತ್ರಿ ಮಾಸಾಶನ ಫಲಾನುಭವಿಗಳು, ಒಟ್ಟಾರೆ 52,33,917 ಫಲಾನುಭವಿಗಳಿಗೆ ಮಾಸಾಶನ ನೀಡಲಾಗುತ್ತಿದೆ ಎಂದು ಸಚಿವರು ತಮ್ಮ ಲಿಖಿತ ಉತ್ತರದಲ್ಲಿ ತಿಳಿಸಿದ್ದಾರೆ.

ಬಾಬು:ಜಿಪಿಆರ್

## ಲೋಕಾಯುಕ್ತ ಪದಚ್ಯುತಿ ಪ್ರಸ್ತಾವ

ಬೆಂಗಳೂರು, ನವೆಂಬರ್ 23 (ಕರ್ನಾಟಕ ವಾರ್ತೆ

ಇಂದು ವಿಧಾನ ಸಭೆಯಲ್ಲಿ ಪ್ರಶ್ನೋತ್ತರ ಅವಧಿ ಮುಗಿದ ನಂತರ ವಿರೋಧ ಪಕ್ಷದ ನಾಯಕ ಜಗದೀಶ್ ಶೆಟ್ಟರ್ ಮತ್ತು ಜನತಾದಳ(ಎಸ್) ಶಾಸಕಾಂಗ ಪಕ್ಷದ ಉಪ ನಾಯಕ ವೈ.ಎಸ್.ವಿ.ದತ್ತ ಅವರು– 1984 ನೇ ಕರ್ನಾಟಕ ಲೋಕಾಯುಕ್ತ ಅಧಿನಿಯಮ (ಕರ್ನಾಟಕ ಲೋಕಾಯುಕ್ತ ತಿದ್ದುಪಡಿ ಅಧಿನಿಯಮ 2015) ರ ನಿಯಮ 6 ರ ಅವಕಾಶಗಳಡಿ ಕರ್ನಾಟಕ ಲೋಕಾಯುಕ್ತರನ್ನು ಪದಚ್ಯುತಿಗೊಳಿಸಬೇಕೆಂದ ಪ್ರಸ್ತಾವ ಮಂಡಿಸಿದರು.

ಈ ಪ್ರಸಾವವನ್ನು ರಾಜ್ಯ ವಿಧಾನ ಸಭಾಧ್ಯಕ್ಷ ಶ್ರೀ ಕಾಗೋಡು ತಿಮ್ಮಪ್ಪ ಅವರು ಸದಸ್ಯರ ಈ ಪ್ರಸಾವವನ್ನು ತಮ್ಮ ಒಪ್ಪಲಾಗಿದೆ ಎಂದು (Admit) ಮಾಡಲಾಗಿದೆ ಎಂದು ಸದನದಲ್ಲಿ ಪ್ರಕಟಿಸಿದರು.

ಈ ಪ್ರಸ್ತಾವಕ್ಕೆ ಆಡಳಿತ ಪಕ್ಷದ ಸಹಮತ ಇದೆ ಎಂದು ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವ ಶ್ರೀ ಟಿ.ಬಿ. ಜಯಚಂದ್ರ ವಿಧಾನ ಸಭಾಧ್ಯಕ್ಷರಿಗೆ ಮಾಹಿತಿ ನೀಡಿದರು.

ಡಿಪಿಎಂ/ಬಾಬು/ಕೆಎಂ

## ಪ್ರಶಸ್ತಿಗಳನ್ನು ವಾಪಸ್ಸು ನೀಡಬೇಡಿ

ಬೆಂಗಳೂರು, ನವೆಂಬರ್ 23 (ಕರ್ನಾಟಕ ವಾರ್ತೆ

ಕರ್ನಾಟಕ ಸರ್ಕಾರದಿಂದ ಸಾಹಿತಿ, ವಿಜ್ಞಾನಿ ಮತ್ತು ಗಣ್ಯ ವ್ಯಕ್ತಿಗಳಿಗೆ ನೀಡಿದ್ದ ಪ್ರಶಸ್ತಿಗಳನ್ನು ವಾಪಸ್ಸು ನೀಡಬೇಡಿ ಎಂದು ವಿನಂತಿಸಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವೆ ಉಮಾಶ್ರೀ ಅವರು ತಿಳಿಸಿದ್ದಾರೆ.

ಇಂದು ವಿಧಾನ ಪರಿಷತ್ ಸದಸ್ಯ ಪೂಜಾರಿ ಅವರ ಪ್ರಶ್ನೆಗೆ ಉತ್ತರಿಸುತ್ತ ಸಾಹಿತಿಗಳು, ವಿಜ್ಞಾನಿ ಮತ್ತು ಗಣ್ಯ ವ್ಯಕ್ತಿಗಳು ಮಾಡಿರುವ ಸಾಧನೆಗಳು ಗುರುತಿಸಿ ಪ್ರಶಸ್ತಿಗಳನ್ನು ನೀಡಲಾಗಿದೆ ಪ್ರಶಸ್ತಿಗಳಿಗೆ ಅಗೌರವ ತೋರದೆ, ಮಾತು–ಕತೆಯ ಅಥವಾ ಚರ್ಚೆಯ ಮೂಲಕ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಬೇಕು ಎಂದು ಸದನಕ್ಕೆ ಅವರು ತಿಳಿಸಿದರು.

ಪಲ್ಲವಿ/ಕೆವಿ/ಕೆಎಂ

## ರಾಜ್ಯದ 2 ನೇ ಹಂತದ ನಗರಗಳಲ್ಲಿ ಉದ್ಯಮ ಸ್ಥಾಪಿಸಿ–ಎಸ್.ಆರ್. ಪಾಟೀಲ್

ಬೆಂಗಳೂರು, ನವೆಂಬರ್ 23 (ಕರ್ನಾಟಕ ವಾರ್ತೆ

ರಾಜ್ಯದ 2 ನೇ ಹಂತದ ನಗರಗಳಲ್ಲಿ ಉದ್ಯಮ ಸ್ಥಾಪಿಸುವಂತೆ ಪ್ರೇರೇಪಿಸಲು ಉದ್ಯಮಿಗಳ ಜೊತೆ ಚರ್ಚಿಸಬೇಕಾಗಿದೆ ಎಂದು ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎಸ್.ಆರ್. ಪಾಟೀಲ್ ತಿಳಿಸಿದ್ದಾರೆ.

ಇಂದು ವಿಧಾನ ಪರಿಷತ್ ಸದಸ್ಯ ವಿ. ಸೋಮಣ್ಣ ಅವರ ಪ್ರಶ್ನೆಗೆ ಉತ್ತರಿಸುತ್ತಾ ಬೆಂಗಳೂರನ್ನು ಹೊರತುಪಡಿಸಿ ರಾಜ್ಯದ ಇತರೆ ಜಿಲ್ಲೆಗಳಲ್ಲಿ ಉದ್ಯಮ ಸ್ಥಾಪಿಸಲು ಉದ್ಯಮಿಗಳಿಗೆ ಉತ್ತೇಜನಾಧಾರಿತ ಭೂ ಹಂಚಿಕೆ, ಕಂಪನಿಗಳನ್ನು ಪ್ರಾರಂಭಿಸಲು ರಿಯಾಯಿತಿ ದರದ ಬಾಡಿಗೆ, ಕರ್ನಾಟಕ ಕೈಗಾರಿಕಾ ಉದ್ಯೋಗ ಆದೇಶ ನಿಯಮ 1946 ರ ಕಂಪನಿಗಳಿಗೆ ವಿನಾಯ್ತಿ, ಪಿಎಫ್ ಹಾಗು ಇ.ಎಸ್.ಐ. ವಂತಿಗೆಯ ಹಿಂಪಾವತಿ ವಿದ್ಯುಚ್ಛಕ್ತಿ ದರದಲ್ಲಿ ರಿಯಾಯಿತಿ ಸ್ಟಾಂಪ್ ಶುಲ್ಕದಲ್ಲಿ ವಿನಾಯಿತಿ ಹಾಗೂ ಇತರೆ ಸೌಲಭ್ಯಗಳನ್ನು ನೀಡಲು ಚಿಂತಿಸಿದೆ ಎಂದು ಸದನಕ್ಕೆ ತಿಳಿಸಿದರು.

ಪಲ್ಲವಿ/ಕೆವಿ/ಕೆಎಂ

## ಚಿತ್ರಸಂತೆಯಲ್ಲಿ ಭಾಗವಹಿಸಲು ಕಲಾವಿದರಿಗೆ ಆಹ್ವಾನ

ಬೆಂಗಳೂರು, ನವೆಂಬರ್ 23 (ಕರ್ನಾಟಕ ವಾರ್ತೆ)

ಕರ್ನಾಟಕ ಚಿತ್ರಕಲಾ ಪರಿಷತ್ತು ಪ್ರತಿವರ್ಷದಂತೆ ಈ ಬಾರಿಯೂ ಸಹ “13ನೇ ಚಿತ್ರಸಂತೆ” ಯನ್ನು ಭಾನುವಾರ 2016 ನೇ ಜನವರಿ 3 ರಂದು ಕುಮಾರಕೃಪಾ ರಸ್ತೆಯಲ್ಲಿ ಆಯೋಜಿಸುತ್ತಿರುವ ಹಿನ್ನೆಲೆಯಲ್ಲಿ ಈ ಕಾರ್ಯಕ್ರಮದಲ್ಲಿ ಭಾಗವಹಿಸಲು ಆಸಕ್ತ ಕಲಾವಿದರು ಈ ಪ್ರಕಟಣೆ ಹೊರಡಿಸಿದ ಮೂರು ದಿನದೊಳಗಾಗಿ ಅರ್ಜಿಯನ್ನು ಕರ್ನಾಟಕ ಚಿತ್ರಕಲಾ ಪರಿಷತ್ತಿನ ಕಚೇರಿ ಸಮಯದಲ್ಲಿ ಪಡೆದು 2015 ನೇ ನವೆಂಬರ್ 30 ರೊಳಗೆ ನೋಂದಾಯಿಸಿಕೊಳ್ಳಬಹುದಾಗಿದೆ.

ಈ ಹಿಂದೆ ಭಾಗವಹಿಸಿದಂತಹ ಕಲಾವಿದರಿಗೆ ಅರ್ಜಿಯನ್ನು ಈಗಾಗಲೇ ನೋಂದಾಯಿತ ಅಂಚೆ ಮೂಲಕ ಕಳುಹಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 080 22261816, 22263424 ಮೊಬೈಲ್ ಸಂಖ್ಯೆ 9980940300 ಅನ್ನು ಸಂಪರ್ಕಿಸಬಹುದಾಗಿದೆ.

ಪಲ್ಲವಿ:ಬಾಬು:ಜಿಪಿಆರ್,